# All India Radio: Bangalore
## Regional Bulletin In Kannada
## 25.04.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಬೆಂಗಳೂರಿನ ಬೆಮೆಲ್‌ನಲ್ಲಿ ಆತ್ಮ ನಿರ್ಭರ್ ಹೈಸ್ಪೀಡ್ ಬುಲೆಟ್ ರೈಲು ಉತ್ಪಾದನಾ ಘಟಕ ಉದ್ಘಾಟಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
2. ಒಳಮೀಸಲಾತಿ ಬೇಡಿಕೆ ಬಗೆಹರಿದ ಹಿನ್ನೆಲೆ - ಪರಿಶಿಷ್ಟ ಸಮುದಾಯದ ನಾಯಕರಿಂದ ಮುಖ್ಯಮಂತ್ರಿಗೆ ಅಭಿನಂದನೆ
3. ಸರ್ಕಾರ ಶೇಕಡ ೧೭ರ ಮೀಸಲಾತಿ ಪ್ರಮಾಣ ಉಳಿಸಿಕೊಳ್ಳುವಂತೆ ಬಿಜೆಪಿ ಆಗ್ರಹ
4. ರೈತರನ್ನು ಒಕ್ಕಲೆಬ್ಬಿಸದೆ ಅರಣ್ಯ ಕಾಯ್ದೆ ಅನ್ವಯ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ
5. ಬೆಂಗಳೂರಿನಲ್ಲಿ ನಾಳೆ ಟಿಸಿಎಸ್ ವರ್ಲ್ಡ್ ೧೦-ಕೆ ಮ್ಯಾರಥಾನ್ ದೇಶ-ವಿದೇಶಗಳ ಓಟಗಾರರು ಭಾಗಿ

<><><><>

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಬೆಂಗಳೂರಿನ ಬೆಮೆಲ್‌ನಲ್ಲಿ ಇಂದು ಆತ್ಮ ನಿರ್ಭರ್ ಹೈಸ್ಪೀಡ್ ಬುಲೆಟ್ ರೈಲು ಉತ್ಪಾದನಾ ಘಟಕ ಆದಿತ್ಯ ಅನ್ನು ಉದ್ಘಾಟಿಸಿದರು. ಈ ವೇಳೆ ಆಕಾಶವಾಣಿ ಮತ್ತು ದೂರದರ್ಶನದೊಂದಿಗೆ ಮಾತನಾಡಿದ ಅವರು, ಮೊದಲ ಮೂಲಮಾದರಿ ಮುಂದಿನ ವರ್ಷ ಹೊರಬರಲಿದೆ. ೨೦೨೭ರ ಕೊನೆಯ ವೇಳೆಗೆ ಬುಲೆಟ್ ರೈಲಿನ ಉತ್ಪಾದನೆ ಆರಂಭವಾಗಲಿದೆ ಎಂದು ತಿಳಿಸಿದರು.

ಕೆಲವೇ ತಿಂಗಳುಗಳಲ್ಲಿ ಬೆಂಗಳೂರು-ಮಂಗಳೂರು-ಮಡ್‌ಗಾಂವ್ ವಂದೇ ಭಾರತ್ ರೈಲು ಸೇವೆ ಆರಂಭವಾಗಲಿದೆ ಎಂದು ಸಚಿವರು ಘೋಷಿಸಿದ್ದಾರೆ. ಬೆಂಗಳೂರು ಮತ್ತು ಮುಂಬೈ ನಡುವೆ ಸೂಪರ್ ಫಾಸ್ಟ್ ಮತ್ತು ವಂದೇ ಭಾರತ್ ಸ್ಲೀಪರ್ ರೈಲು ಕೂಡ ಶೀಘ್ರದಲ್ಲೇ ಕಾರ್ಯ ನಿರ್ವಹಿಸಲಿವೆ ಎಂದು ತಿಳಿದ್ದಾರೆ. ಇದೇ ವೇಳೆ ಬೆಂಗಳೂರಿನಲ್ಲಿ ಸಬ್‌ಅರ್ಬನ್ ರೈಲು ಯೋಜನೆಯ ಪ್ರಗತಿಯ ಬಗ್ಗೆಯೂ ಅವರು ಸಂತಸ ವ್ಯಕ್ತಪಡಿಸಿದ್ದಾರೆ.

<><><><>

ಯಾವುದೇ ಸಮುದಾಯಕ್ಕೂ ಅನ್ಯಾಯ ಆಗದಂತೆ ಸಮಭಾವದಿಂದ ಒಳ ಮೀಸಲಾತಿ ಬೇಡಿಕೆಯನ್ನು ಬಗೆಹರಿಸಿದಕ್ಕಾಗಿ ಸಚಿವ ಆರ್.ಬಿ.ತಿಮ್ಮಾಪುರ್, ಮಾಜಿ ಸಚಿವ ಹೆಚ್.ಆಂಜನೇಯ ಮತ್ತು ಪರಿಶಿಷ್ಟ ಸಮುದಾಯದ ಶಾಸಕರ ನೇತೃತ್ವದ ನಿಯೋಗ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅಭಿನಂದನೆ ಸಲ್ಲಿಸಿದರು. ಇನ್ನೊಂದೆಡೆ ಬೆಳಗಾವಿಯಲ್ಲಿ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಸರ್ಕಾರದ ಒಳ ಮೀಸಲಾತಿ ನಿರ್ಧಾರವನ್ನು ಸ್ವಾಗತಿಸಿದ್ದಾರೆ. ಎಲ್ಲರ ಒಪ್ಪಿಗೆಯ ಮೂಲಕ ಒಳ ಮೀಸಲಾತಿ ಜಾರಿಗೊಳಿಸುವ ಮಹತ್ವದ ತೀರ್ಮಾನ ತೆಗೆದುಕೊಂಡ ಸರ್ಕಾರ ಅನೇಕ ದಿನಗಳ  ಸಮಸ್ಯೆಗೆ ಪರಿಹಾರ ಕಂಡುಕೊಂಡಿದೆ ಎಂದು ತಿಳಿಸಿದ್ದಾರೆ. ಸರ್ಕಾರದ ನಿರ್ಧಾರವನ್ನು ಬಿಜೆಪಿ ನಾಯಕರು ಟೀಕಿಸುವುದರಲ್ಲಿ ಅರ್ಥವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಒಳ ಮೀಸಲಾತಿ ಹಂಚಿಕೆ ಮಾಡುವುದರಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಒಂದೆಡೆ ಉದ್ಯೋಗಕ್ಕಾಗಿ ಯುವಕರು ಪ್ರತಿಭಟನೆ ನಡೆಸುತ್ತಿದ್ದರೆ, ಮತ್ತೊಂದೆಡೆ ಪರಿಶಿಷ್ಟ ಸಮುದಾಯಗಳು ಒಳಮೀಸಲಾತಿಗಾಗಿ ಹೋರಾಟ ನಡೆಸುತ್ತಿವೆ ಎಂದು ತಿಳಿಸಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಶೇಕಡ ೧೭ರಷ್ಟು ಮೀಸಲಾತಿ ನೀಡಲಾಗಿತ್ತು. ಕಾಂಗ್ರೆಸ್ ಸರ್ಕಾರ ಅದನ್ನು ಶೇಕಡ ೧೫ಕ್ಕೆ ಇಳಿಸುವ ಮೂಲಕ

ಪರಿಶಿಷ್ಟರಿಗೆ ಅನ್ಯಾಯ ಮಾಡಿದೆ ಎಂದು ದೂರಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕೂಡ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದು, ಒಳಮೀಸಲಾತಿ ಹೆಸರಲ್ಲಿ ಎರಡೂವರೆ ವರ್ಷಗಳ ಕಾಲ ಅಮೂಲ್ಯ ಸಮಯವನ್ನು ಹಾಳು ಮಾಡಿದ ಕಾಂಗ್ರೆಸ್ ಸರ್ಕಾರ ಪರಿಶಿಷ್ಟರಿಗೆ ಅನ್ಯಾಯ ಮಾಡಿದೆ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ. ಮುಂದಿನ ದಿನಗಳಲ್ಲಿ ಸರ್ಕಾರ ತಕ್ಕ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಸರ್ಕಾರಕ್ಕೆ ಬದ್ಧತೆಯಿದ್ದರೆ ಈ ಹಿಂದೆ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಜಾರಿಗೊಳಿಸಿದ್ದ ಶೇಕಡ ೧೭ರ ಮೀಸಲಾತಿ ಪ್ರಮಾಣವನ್ನು ಉಳಿಸಿಕೊಳ್ಳಲು ಸೂಕ್ತ ಕಾನೂನು ಹೋರಾಟ ನಡೆಸುವುದು ಒಳಿತು ಎಂದು ತಿಳಿಸಿದ್ದಾರೆ.

<><><><>

ಸುಪ್ರೀಂ ಕೋರ್ಟ್ ಆದೇಶವನ್ನು ಪಾಲಿಸುವ ಅರಣ್ಯ ಇಲಾಖೆ ಅಧಿಕಾರಿಗಳು ರೈತರನ್ನು ಒಕ್ಕಲೆಬ್ಬಿಸದೇ ಅರಣ್ಯ ಕಾಯ್ದೆ ಅನ್ವಯ ಕಾರ್ಯನಿರ್ವಹಿಸಬೇಕು ಎಂದು ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ. ತುಮಕೂರು ಜಿಲ್ಲೆಯ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ಯೋಜನೆಗಳಿಗೂ, ರೈತರಿಗೂ ಡೀಮ್ಡ್ ಅರಣ್ಯ ಎನ್ನುವುದು ತಲೆನೋವಾಗಿ ಪರಿಣಮಿಸಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಜಂಟಿ ಸರ್ವೆ ನಡೆಸಿ ನಿರಪೇಕ್ಷಣಾ ಪತ್ರ ನೀಡಬೇಕು ಎಂದು ಸೂಚಿಸಿದ್ದಾರೆ. ನಿರಪೇಕ್ಷಣಾ ಪತ್ರ ನೀಡದೆ ಇರುವುದರಿಂದ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿದ್ದು, ಅರಣ್ಯ ಇಲಾಖೆ ರಾಜ್ಯದಲ್ಲಿರುವ ಕಾಯ್ದೆಯಂತೆ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ನವದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಮಾತನಾಡಿ, ಡೀಮ್ಡ್ ಅರಣ್ಯ ಎಂದು ಒಕ್ಕಲೆಬ್ಬಿಸದಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅರಣ್ಯ ಇಲಾಖೆ ರಾಜ್ಯದಲ್ಲಿರುವ ಅರಣ್ಯ ಕಾಯ್ದೆ ಅನ್ವಯ ಕಾರ್ಯನಿರ್ವಹಿಸಬೇಕು, ಕರ್ನಾಟಕ ಅರಣ್ಯ ಕಾಯ್ದೆ ಅನ್ವಯ ಪಹಣಿಯಲ್ಲಿರುವ ರೈತರಿಗೆ ತೊಂದರೆ ನೀಡಬಾರದು ಎಂದು ತಿಳಿಸಿದ್ದಾರೆ.

<><><><>

೨೦೨೨ರ ಕಲಬುರಗಿಯ ಲಾಡ್ಲೆ ಮಶಾಕ್ ದರ್ಗಾ ಹಿಂಸಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಯುವಕರ ವಿರುದ್ಧದ ಪ್ರಕರಣಗಳನ್ನು ಪರಿಶೀಲಿಸುವಂತೆ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಸರ್ಕಾರವು ಪ್ರಕರಣವನ್ನು ಪರಿಶೀಲಿಸಬೇಕು ಮತ್ತು ಕೆಲವರ ವಿರುದ್ಧದ ಪ್ರಕರಣಗಳನ್ನು ಕೈಬಿಡಬೇಕೆಂದು ಒತ್ತಾಯಿಸಿದ್ದಾರೆ. ಯು.ಟಿ.ಖಾದರ್ ಅವರು, ಬರೆದ ಪತ್ರವನ್ನು ಶಿವಸೇನೆ ಸೇರಿದಂತೆ ಹಿಂದೂ ಸಂಘಟನೆಗಳು ಖಂಡಿಸಿವೆ. ಈ ಘಟನೆಯು ಗಂಭೀರ ಹಿಂಸಾಚಾರವನ್ನು ಒಳಗೊಂಡಿದ್ದು, ಸರ್ಕಾರ ಆರೋಪಗಳನ್ನು ಕೈಬಿಟ್ಟರೆ ಪ್ರತಿಭಟನೆಗಳಿಗೆ ಕಾರಣವಾಗಬಹುದು ಎಂದು ಎಚ್ಚರಿಕೆ ನೀಡಿವೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವು ಬಿತ್ತರಗೊಳ್ಳಲಿದೆ.

<><><><>

ಐತಿಹಾಸಿಕ ಮದ್ದೂರು ಉತ್ಸವ-೨೦೨೬ಕ್ಕೆ ಮಂಡ್ಯ ಜಿಲ್ಲಾ ಉಸ್ತುವಾರಿ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಇಂದು ವಿದ್ಯುಕ್ತ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಮದ್ದೂರು

ಕೇವಲ ಭೌಗೋಳಿಕ ಗಡಿಯಲ್ಲ, ಇದು ಇತಿಹಾಸದ ಪುಟಗಳಲ್ಲಿ ದಾಖಲಾದ ಪುಣ್ಯಭೂಮಿ ಎಂದು ಬಣ್ಣಿಸಿದ್ದಾರೆ. ಮದ್ದೂರು ಉತ್ಸವವನ್ನು ಮುಂದಿನ ವರ್ಷದಿಂದ ರಾಜ್ಯಮಟ್ಟದ ಉತ್ಸವವನ್ನಾಗಿ ಆಚರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ. ಸ್ಥಳೀಯ ಕಲಾವಿದರಿಗೆ ಶಾಶ್ವತ ವೇದಿಕೆ ನಿರ್ಮಿಸಲು ೨ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಾಗುವುದು, ಮದ್ದೂರು ಕೆರೆಯನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಿ, ದೋಣಿ ವಿಹಾರಕ್ಕೆ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಯುವಕರು ಕೃಷಿಯತ್ತ ಒಲವು ತೋರಿಸಬೇಕು ಎಂದು ಸಚಿವರು ಕರೆ ನೀಡಿದ್ದಾರೆ.

<><><><>

ಗ್ರಾಮೀಣ ಪ್ರದೇಶದ ಜನರ ಆಶೋತ್ತರಗಳಿಗೆ ಧ್ವನಿಯಾಗಿ ಪಂಚಾಯತ್ ರಾಜ್ ಇಲಾಖೆಯು ಕೆಲಸ ನಿರ್ವಹಿಸುತ್ತಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ "ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೇಲೆ ಗ್ರಾಮೀಣಾಭಿವೃದ್ಧಿಯ ಜವಾಬ್ದಾರಿಯಿದೆ. ಅಧಿಕಾರಿಗಳು ಸಾಮಾಜಿಕ ಬದಲಾವಣೆಗಾಗಿ ನನ್ನ ಕೆಲಸ ಎಂಬ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

<><><><>

ಹಾವೇರಿ ಜಿಲ್ಲೆಯಲ್ಲಿ ಮಾದಕ ವಸ್ತುಗಳ ವಿರುದ್ಧ ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದ್ದು, ೨೦೨೪ರ ಜನವರಿಯಿಂದ ಈವರೆಗೆ ಏಳು ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ೧೬ ಮಂದಿಯನ್ನು ಬಂಧಿಸಿ ೨೨ ಲಕ್ಷ ೭೭ ಸಾವಿರ ರೂಪಾಯಿ ಮೌಲ್ಯದ ೬೪ ಕೆ.ಜಿ ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ಶಿರಕೋಳ ತಿಳಿಸಿದ್ದಾರೆ. ಮಾದಕವಸ್ತು ಮುಕ್ತ ಕರ್ನಾಟಕ ಆಪ್ ಅಭಿವೃದ್ಧಿಪಡಿಸಿ, ಬಿಡುಗಡೆ ಮಾಡಲಾಗಿದೆ. ಈ ಆಪ್ ಮೂಲಕ ಮಾದಕ ದ್ರವ್ಯಗಳ ಮಾರಾಟ, ಸಾಗಣೆ, ಸೇವನೆ ಮಾಡುವವರ ವಿವರವನ್ನು ನಿರ್ಭಯವಾಗಿ ನಮೂದು ಮಾಡಬೇಕು ಎಂದು ಮನವಿ ಮಾಡಿದ್ದಾರೆ.

<><><><>

ಬೆಂಗಳೂರಿನಲ್ಲಿ ನಾಳೆ ಮುಂಜಾನೆ ೫ ಗಂಟೆಯಿಂದ ಮಧ್ಯಾಹ್ನ ೧ ಗಂಟೆಯವರೆಗೆ ಟಿಸಿಎಸ್ ವರ್ಲ್ಡ್-೧೦ಕೆ ಮ್ಯಾರಥಾನ್ ಆಯೋಜಿಸಲಾಗಿದೆ. ಈ ಮ್ಯಾರಥಾನ್ ಓಟದಲ್ಲಿ ಸುಮಾರು ೩೦ ಸಾವಿರ ಮಂದಿ ಭಾಗವಹಿಸಲಿದ್ದಾರೆ. ಈ ಓಟದಲ್ಲಿ ದೇಶ-ವಿದೇಶಗಳ ಓಟಗಾರರು ಭಾಗವಹಿಸಲಿದ್ದಾರೆ. ಮಹಿಳೆಯರ ವಿಭಾಗದಲ್ಲಿ ಹಾಲಿ ಚಾಂಪಿಯನ್ ಉಗಾಂಡದ ಸಾರ ಚೆಲಂಗತ್, ಪುರುಷರ ವಿಭಾಗದಲ್ಲಿ ಹರ್ಬಲ್ಟ್ ಕಿಬೆಟ್, ರೋಡ್ರಿಗ್ ಕ್ವಿಝೇರಾ ಭಾಗವಹಿಸುತ್ತಿರುವುದು ವಿಶೇಷವಾಗಿದೆ. ಮ್ಯಾರಥಾನ್ ಹಿನ್ನೆಲೆಯಲ್ಲಿ ವಿಧಾನಸೌಧದ ಕಡೆಗೆ ಯಾವುದೇ ವಾಹನಗಳ ಪ್ರವೇಶಕ್ಕೆ ಅವಕಾಶವಿಲ್ಲ ಎಂದು ಬೆಂಗಳೂರು ಟ್ರಾಫಿಕ್ ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಕಾರ್ಯಕ್ರಮದ ಅಂಗವಾಗಿ ಬಿಎಂಆರ್‌ಸಿಎಲ್ ವತಿಯಿಂದ ಮೆಟ್ರೋ ಸೇವೆಯನ್ನು ಬೆಳಗ್ಗೆ ೩.೩೦ರಿಂದ ಆರಂಭಿಸಲಾಗುತ್ತಿದ್ದು, ಈ ಸೇವೆಯ ಸದ್ಬಳಕೆ ಮಾಡಿಕೊಳ್ಳುವಂತೆ ಕೋರಲಾಗಿದೆ.

<><><><>

ಚಾಮರಾಜನಗರ ಜಿಲ್ಲೆಯಲ್ಲಿ ತಾಪಮಾನ ಏರಿಕೆಯಾಗುತ್ತಿದ್ದು ಸುಡುಬಿಸಿಲಿಗೆ ಜನರು ಕಂಗಾಲಾಗಿದ್ದಾರೆ. ಜಿಲ್ಲೆಯಾದ್ಯಂತ ಹೆಚ್ಚಿದ ತಾಪಮಾನ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ವತಿಯಿಂದ ಗುಂಡ್ಲುಪೇಟೆಯ ತಾಲೂಕು ಆಸ್ಪತ್ರೆಯಲ್ಲಿ ಹೀಟ್ ಸ್ಟ್ರೋಕ್ ಮ್ಯಾನೇಜ್ಮೆಂಟ್ ವಾರ್ಡ್ ತೆರೆದಿದ್ದು ೧೫ ಬೆಡ್‌ಗಳು, ಐಸ್ ಪ್ಯಾಕ್, ಹವಾನಿಯಂತ್ರಿತ ಕೋಣೆ, ಗ್ಲುಕೋಸ್ ದ್ರಾವಣಗಳನ್ನು ಸಂಗ್ರಹಿಸಿಡಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>